# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 16.09.2011

## *ಪೂರ್ವ ಮತ್ತು ದಕ್ಷಿಣ ವಲಯಗಳಲ್ಲಿ ರಸ್ತೆ ಗುಂಡಿ ಮುಚ್ಚುವ ಕಾರ್ಯ ಪ್ರಗತಿ*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೂರ್ವ ವಲಯದ ಶಾಂತಿನಗರ, ಶಿವಾಜಿನಗರ, ಸರ್ವಜ್ಞನಗರ, ಸಿ.ವಿ.ರಾಮನ್‌ನಗರ, ಪುಲಿಕೇಶಿನಗರ ಮತ್ತು ಹೆಬ್ಬಾಳ ವಿಭಾಗದ ಪ್ರಮುಖ ರಸ್ತೆಗಳಲ್ಲಿ ದಿನಾಂಕ: 14 ಮತ್ತು 15.09.2011 ರಂದು ಪ್ರಮುಖ ರಸ್ತೆಗಳಾದ ಲಾಂಗ್‌ಫೋರ್ಡ್ ರಸ್ತೆ, ಡಬಲ್ ರೋಡ್, ಸೆಪಿಂಗ್ಸ್ ರೋಡ್, ಪ್ಯಾಲೇಸ್ ರಸ್ತೆ, ರಾಜಭವನ ರಸ್ತೆ, ಕಬ್ಬನ್‌ಪೇಟೆ ಮುಖ್ಯರಸ್ತೆ, ಜಯಮಹಲ್ ಮುಖ್ಯರಸ್ತೆ, ಮುಂತಾದ ಕಡೆಗಳಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ಕೈಗೊಳ್ಳಲಾಯಿತು.

ದಕ್ಷಿಣ ವಲಯದ ಪದ್ಮನಾಭನಗರ ಉಪ ವಿಭಾಗದ ಕುಮಾರಸ್ವಾಮಿ ಬಡಾವಣೆ, ಚಿಕ್ಕಲ್ಲಸಂದ್ರ, ಹೊಸಕೆರೆಹಳ್ಳಿ, ಕೆ.ಆರ್. ರಸ್ತೆ, ಕನಕಪುರ ರಸ್ತೆ, ಮುಂತಾದ ಪ್ರಮುಖ ರಸ್ತೆಗಳಲ್ಲಿ ರಸ್ತೆ ಗುಂಡಿ ಮುಚ್ಚುವ ಕಾರ್ಯ ಕೈಗೊಳ್ಳಲಾಯಿತು. ಪದ್ಮನಾಭನಗರ ವಿಭಾಗದಲ್ಲಿ ಸುಮಾರು 989 ರಸ್ತೆ ಗುಂಡಿಗಳನ್ನು ಗುರುತಿಸಲಾಗಿದ್ದು, ಅದರಲ್ಲಿ 286 ಗುಂಡಿಗಳನ್ನು ಮುಚ್ಚಲಾಗಿದ್ದು, ಇನ್ನೂ 703 ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ಪ್ರಗತಿಯಲ್ಲಿರುತ್ತದೆ.

ಚಿಕ್ಕಪೇಟೆ ವಿಭಾಗದ ಜೆ.ಸಿ. ರಸ್ತೆ, ಲಾಲ್‌ಬಾಗ್ ರಸ್ತೆ, ಸುಧಾಮನಗರ ರಸ್ತೆ, ಬುಲ್ ಟೆಂಪಲ್ ರಸ್ತೆ, ಮರಿಯಪ್ಪ ರಸ್ತೆ, ಸಿದ್ದಾಪುರ, ಲಕ್ಕಸಂದ್ರ, ಕನಕನಪಾಳ್ಯ, ಹೊಂಬೇಗೌಡನಗರ, ಮುಂತಾದ ಕಡೆ ದಿನಾಂಕ: 15.09.2011 ರಂದು ರಸ್ತೆ ಗುಂಡಿ ಮುಚ್ಚುವ ಕಾರ್ಯ ಕೈಗೊಳ್ಳಲಾಯಿತು. ಈ ವಿಭಾಗದಲ್ಲಿ 345 ರಸ್ತೆ ಗುಂಡಿಗಳನ್ನು ಗುರುತಿಸಲಾಗಿದ್ದು, ಅದರಲ್ಲಿ 259 ಗುಂಡಿಗಳನ್ನು ಮುಚ್ಚಲಾಗಿದೆ. ಇನ್ನೂ 86 ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ಪ್ರಗತಿಯಲ್ಲಿದೆ.

ಇದೇ ರೀತಿ ಎಲ್ಲಾ ವಲಯದ ಉಪ ವಿಭಾಗಗಳಲ್ಲಿ ರಸ್ತೆ ಗುಂಡಿ ಮುಚ್ಚಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ವಲಯ ಮುಖ್ಯ ಅಭಿಯಂತರರುಗಳು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**